ಆ) ತರೀಕೆರೆ ತಾಲ್ಲೂಕಿಗೆ ಸರ್ಕಾರಿ ಕೈಗಾರಿಕಾ ತರಬೇತಿ ಕೇಂದ್ರವನ್ನು ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ ಅದರ ಅಂದಾಜು ವೆಚ್ಚವೆಷ್ಟು?

ಶ್ರೀ ಎ.ಎಂ. ಹಿಂಡಸಗೇರಿ (ಕಾರ್ಮಿಕ ಮತ್ತು ವಕ್ಫ್ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ತರೀಕೆರೆ ತಾಲ್ಲೂಕಿನಲ್ಲಿ ಮುನ್ಸೀಫ್ ನ್ಯಾಯಾಲಯದ ಕಟ್ಟಡ ಕಟ್ಟುವುದರ ಬಗ್ಗೆ

1292 (1682) ಶ್ರೀ ನೀಲಕಂಠಪ್ಪ ಬಿ.ಆರ್.(ತರೀಕೆರೆ) : ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ತರೀಕೆರೆ ತಾಲ್ಲೂಕಿನಲ್ಲಿ ಸಿವಿಲ್ ಮತ್ತು ಮುನ್ಸಿಫ್ ನ್ಯಾಯಾಲಯಗಳಿದ್ದು, ಈಗ ಸಿವಿಲ್ ನ್ಯಾಯಾಲಯದ ಕಟ್ಟಡವಿದ್ದು, ಅದರ ಮೇಲ್ಭಾಗದಲ್ಲಿ ಮುನ್ಸೀಫ್ ನ್ಯಾಯಾಲಯದ ಕಟ್ಟಡ ಕಟ್ಟಲು ಅಂದಾಜು ನಕ್ಷೆ ಆಗಿದೆಯೆ?

ಆ) ಹಾಗಿದ್ದಲ್ಲಿ ಈ ವರ್ಷ ನಿರ್ಮಾಣ ಕಾರ್ಯ ಪ್ರಾರಂಭಿಸಲಾಗುವುದೇ?

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರು) :

ಅ) ತರೀಕೆರೆಯಲ್ಲಿನ ನ್ಯಾಯಾಲಯಗಳು ಒಂದೇ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ. ಈ ಕಟ್ಟಡದ ಮೇಲೆ ಮೊದಲನೆ ಮಹಡಿಯ ನಿರ್ಮಾಣದ ಬಗ್ಗೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಆ) ಈ ಪ್ರಶ್ನೆಯು ಉದ್ಭವಿಸುವುದಿಲ್ಲ.

ಕೊಳ್ಳೆಗಾಲ ತಾಲ್ಲೂಕಿನ ಪಶುಸಂಗೋಪನಾ ಆಸ್ಪತ್ರೆಗಳಲ್ಲಿರುವ ಖಾಲಿ ಹುದ್ದೆಗಳು

1293 (1535) ಶ್ರೀ ನಂಜುಂಡಸ್ವಾಮಿ ಜಿ. ಹೆಚ್ (ಕೊಳ್ಳೆಗಾಲ) : ಮಾನ್ಯ ಪಶುಸಂಗೋಪನಾ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಳ್ಳೆಗಾಲ ತಾಲ್ಲೂಕಿನ ಪಶುಸಂಗೋಪನಾ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರು ಹಾಗೂ ನೌಕರರ ಹುದ್ದೆಗಳೆಷ್ಟು; ಮತ್ತು ಯಾವ ಯಾವ ಆಸ್ಪತ್ರೆಗಳಲ್ಲಿ ಖಾಲಿ ಇವೆ;

ಆ) ಈ ಹುದ್ದೆಗಳನ್ನು ಇದುವರೆವಿಗೂ ತುಂಬದಿರಲು ಕಾರಣಗಳೇನು;

ಇ) ಕೊಳ್ಳೆಗಾಲ ತಾಲ್ಲೂಕಿನ ಪಶುವೈದ್ಯ ಶಾಲೆಗಳಿಗೆ ಔಷಧಿಗಳ ಪೂರೈಕೆ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಈ) ಹಾಗಿದ್ದಲ್ಲಿ ಈ ಕೊರತೆಯನ್ನು ನಿವಾರಿಸಲು ಸರ್ಕಾರದ ಕೈಗೊಂಡ ಕ್ರಮವೇನು?